ಗ್ರಾಮೀಣ ರಸ್ತೆಗಳ ದುರಸ್ತಿ

(610); ಡಾ: ಅಜಯ್‌ಸಿಂಗ್ (ಜೇವರ್ಗಿ)

ಅ) ಗುಲ್ಬರ್ಗಾ ಜಿಲ್ಲೆಯ ಜೇವರ್ಗಿ ತಾಲ್ಲೂಕಿನಲ್ಲಿ ಇತ್ತೀಚೀನ ದಿನಗಳಲ್ಲಿ ಅತಿವೃಷ್ಟಿಯಿಂದ ಹಾನಿಗೊಳಗಾದ ರಸ್ತೆಗಳ ಉದ್ದ ಎಷ್ಟು?

ಆ) ಹಾಳಾದ ರಸ್ತೆಗಳ ದುರಸ್ತಿ ಕಾರ್ಯ ಇಲ್ಲಿಯವರೆಗೆ ಪ್ರಾರಂಭವಾಗದಿರುವ ವಿಚಾರ ಸರ್ಕಾರದ ಗಮನಕ್ಕೆ ಬಂದಿದೆಯೇ?

ಇ) ಹಾಗಿದ್ದಲ್ಲಿ ಸದರಿ ರಸ್ತೆಗಳ ಮುಖ್ಯ ದುರಸ್ತಿ ಕಾಮಗಾರಿ ಕೈಗೊಳ್ಳಲು ಸರ್ಕಾರ ಜೇವರ್ಗಿ ಮತಕ್ಷೇತ್ರಕ್ಕೆ ಬಿಡುಗಡೆ ಮಾಡಿದ ಅನುದಾನದ ಮೊತ್ತವೆಷ್ಟು?

ಶ್ರೀ ಹೆಚ್ ಕೆ ಪಾಟೀಲ್ (ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು)

ಅ) ಗುಲ್ಬರ್ಗಾ ಜಿಲ್ಲೆಯ ಜೇವರ್ಗಿ ತಾಲ್ಲೂಕಿನಲ್ಲಿ ಇತ್ತೀಚೀನ ದಿನಗಳಲ್ಲಿ ಅತಿವೃಷ್ಟಿಯಿಂದ 244.80 ಕಿ.ಮೀ. ಉದ್ದದ ಗ್ರಾಮೀಣ ರಸ್ತೆಗಳು ಹಾಳಾಗಿರುತ್ತವೆ.

ಆ) ಬಂದಿದೆ

ಇ) ಅತೀವೃಷ್ಟಿಯಿಂದ ಹಾಳಾಗಿರುವ 244 80 ಕಿ.ಮೀ ಉದ್ದದ 81 ರಸ್ತೆಗಳ ದುರಸ್ತಿಗಾಗಿ ₹ 229 70 ಲಕ್ಷದ ಕ್ರಿಯಾ ಯೋಜನೆಯನ್ನು ಜಿಲ್ಲಾ ಪಂಚಾಯತಿಯಲ್ಲಿ ತಯಾರಿಸಲಾಗಿದೆ ಸದರಿ ಕಾಮಗಾರಿಗಳನ್ನು ಅನುದಾನ ಲಭ್ಯತೆಗೆ ಅನುಗುಣವಾಗಿ ಜಿಲ್ಲಾ ಪಂಚಾಯತಿ ವತಿಯಿಂದ ಆದ್ಯತೆ ಮೇರೆಗೆ ಕೈಗೊಳ್ಳಲು ಕ್ರಮ ವಹಿಸುವಂತೆ ಸೂಚಿಸಲಗುವುದು